# ಮಂಗಳೂರು ವಿಶ್ವವಿದ್ಯಾನಿಲಯ

42ನೇ ವಾರ್ಷಿಕ ಘಟಿಕೋತ್ಸವದ ಪೂರ್ವಭಾವಿಯಾಗಿ ದಿನಾಂಕ 14.06.2024ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಗಳು.

ಉಪಸ್ಥಿತರು:

ಅನುಪಸ್ಥಿತರು:

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಮಾನ್ಯ ಕುಲಪತಿಗಳನ್ನು, ಎಲ್ಲಾ ಅಧಿಕಾರಿಗಳನ್ನು, ಶೈಕ್ಷಣಿಕ ಮಂಡಳಿಯ ಸದಸ್ಯರುಗಳನ್ನು ಹಾಗೂ ವಿಶೇಷ ಆಹ್ವಾನಿತರುಗಳನ್ನು ಮತ್ತು ಇತರರನ್ನು ಸಭೆಗೆ ಸ್ವಾಗತಿಸಿದರು.

- **ಸ್ವಾಗತ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(Vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಡಾ. ಜೋಶ್ನ ರಾವ್ ಕೆ, ಪ್ರಾಂಶುಪಾಲರು, ಪ್ರೇಮಕಾಂತಿ ಕಾಲೇಜ್ ಆಫ್ ಎಜುಕೇಶನ್, ಮಣ್ಣಗುಡ್ಡೆ, ಮಂಗಳೂರು ಹಾಗೂ ಶ್ರೀಮತಿ ಸುಚಿತ್ರ, ಪ್ರಾಂಶುಪಾಲರು, ಮೇಧ ಕಾಲೇಜು, ನೆಹರು ನಗರ, ಪುತ್ತೂರು ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಿದರು.

- **ಕೃತಜ್ಞತೆ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(Vi)ರ ಪ್ರಕಾರ ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ ಶ್ರೀ. ಮೋಹನ್ ನಾಯ್ಕ್, ಪ್ರಾಂಶುಪಾಲರು, ಕರಾವಳಿ ಕಾಲೇಜು,

ಮಂಗಳೂರು  ಮತ್ತು ಡಾ. ಭಾಸ್ಕರ್ ಶೆಟ್ಟಿ ಎಸ್, ಡಾ. ಜಿ ಶಂಕರ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು & ಸ್ನಾತಕೋತ್ತರ ಅಧ್ಯಯನ ಕೇಂದ್ರ, ಅಜ್ಜರಕಾಡು, ಉಡುಪಿ ಇವರ ಶೈಕ್ಷಣಿಕ ಮಂಡಳಿ ಸದಸ್ಯತ್ವದ ಅವಧಿಯು ದಿನಾಂಕ 12.06.2024 ರಂದು ಕೊನೆಗೊಂಡಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಸದರಿಯವರು ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರಿಗೆ ಶೈಕ್ಷಣಿಕ ಮಂಡಳಿಯ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳು.

## ಪ್ರಸ್ತಾವಿಕ

ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.

1. ಮಂಗಳೂರು ವಿಶ್ವವಿದ್ಯಾನಿಲಯದ 42ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವನ್ನು ದಿನಾಂಕ 15.06.2024ರಂದು ವಿಶ್ವವಿದ್ಯಾನಿಲಯದ ಮಂಗಳ ಸಭಾಂಗಣದಲ್ಲಿ ಹಮ್ಮಿಕೊಂಡಿರುವ ವಿಷಯವನ್ನು ಸಭೆಗೆ ತಿಳಿಸುತ್ತಾ, ಗೌರವಾನ್ವಿತ ರಾಜ್ಯಪಾಲರು ಹಾಗೂ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾಗಿರುವ ಶ್ರೀ ಥಾವರ್ ಚಂದ್ ಗೆಹ್ಲೋಟ್, ಇವರು ಸಮಾರಂಭದ ಅಧ್ಯಕ್ಷತೆ ವಹಿಸಿ ಅಧ್ಯಕ್ಷೀಯ ಭಾಷಣ ಮಾಡಲಿರುವ ವಿಚಾರವನ್ನು ಸಭೆಗೆ ತಿಳಿಸಿದರು. ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾನಿಲಯದ ಸಹ ಕುಲಾಧಿಪತಿಗಳಾದ ಡಾ. ಎಂ.ಸಿ. ಸುಧಾಕರ್ ಹಾಗೂ ಮುಖ್ಯ ಅತಿಥಿಗಳಾಗಿ ಪ್ರೊ, ಸಚಿನ್ ಚತುರ್ವೇದಿ, ಮಹಾ ನಿರ್ದೇಶಕರು, ಅಭಿವೃದ್ಧಿಶೀಲ ರಾಷ್ಟ್ರಗಳ ಸಂಶೋಧನೆ ಮತ್ತು ಮಾಹಿತಿ ವ್ಯವಸ್ಥೆ, ನವದೆಹಲಿ ಇವರು ಘಟಿಕೋತ್ಸವ ಭಾಷಣ ಮಾಡಲಿರುವ ವಿಚಾರವನ್ನು ಹಾಗೂ ಘಟಕೋತ್ಸವ ಸಂಬಂಧದ ತಯಾರಿಗಳನ್ನು ಹಾಗೂ ಮುಖ್ಯ ಅತಿಥಿಗಳ ವಿವರಗಳನ್ನು ವಿಸ್ತಾರವಾಗಿ ಸಭೆಗೆ ತಿಳಿಸುತ್ತಾ, ಶೈಕ್ಷಣಿಕ ಮಂಡಳಿಯ ಎಲ್ಲಾ ಸದಸ್ಯರುಗಳನ್ನು ಘಟಿಕೋತ್ಸವ ಸಮಾರಂಭಕ್ಕೆ ಆತ್ಮೀಯವಾಗಿ ಆಹ್ವಾನಿಸಿದರು

**ಈ ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಶೈ.ವಿ.ಸ.1:1 (2024-25)

**ವಿಷಯ:** 42ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪಡೆಯಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳ ಪಟ್ಟಿ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಶೈ.ವಿ.ಸ.1: 2(2024-25)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 42ನೇ ವಾರ್ಷಿಕ ಘಟಿಕೋತ್ಸವದ ಸಂದರ್ಭದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯಲ್ಲಿ ನಮೂದಿಸಿರುವ ಮಹನೀಯರುಗಳಾದ ಶ್ರೀ ಕೆ. ಪ್ರಕಾಶ್ ಶೆಟ್ಟಿ ಇವರಿಗೆ ಸಮಾಜ ಸೇವೆಗೆ, ಡಾ. ತುಂಬೆ ಮೊಹಿದ್ದೀನ್ ಇವರಿಗೆ ಶಿಕ್ಷಣ ಮತ್ತು ಸಮಾಜ ಸೇವೆ (ಅಲ್ಪಸಂಖ್ಯಾತ) ಹಾಗೂ ಡಾ. ರೊನಾಲ್ಡ್ ಕೊಲ್ಲಾಸೊ ಇವರಿಗೆ ಸಮಾಜ ಸೇವೆಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಗಳು.** |